ದಿನಾಂಕ 14-07-2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ 1, 2, 4, 6 ಮತ್ತು 7 ನೇ ಪ್ರತಿವಾದಿಗಳ ಪರ ವಕೀಲರಿಂದ**

2014 ನೇ ಇಸವಿಯಲ್ಲಿ ನನ್ನ ಪರ ಈ ದಾವೆಯಲ್ಲಿ ವಕಾಲತ್ತು ಹಾಕಲಾಗಿದೆ ಎಂದರೆ ಸರಿಯಲ್ಲ. ಈ ದಾವೆ ಸಲ್ಲಿಸಿದ ಎಷ್ಟು ದಿನಗಳ ನಂತರ ನನ್ನ ಪರ ವಕೀಲರನ್ನು ನೇಮಕ ಮಾಡಲಾಗಿದೆ ಎಂದು ನನಗೆ ನೆನಪಿಲ್ಲ. ಈ ದಾವೆಯಲ್ಲಿ ನಾನು ಪ್ರತಿವಾದ ಪತ್ರ ಸಲ್ಲಿಸಿರುತ್ತೇನೆ. ಆದರೆ ಯಾವಾಗ ಸಲ್ಲಿಸಿದ್ದೇನೆ ಎಂದು ನನಗೆ ನೆನಪಿಲ್ಲ. ನಾನು ಪ್ರತಿವಾದ ಪತ್ರ ಸಲ್ಲಿಸಿ 3 ವರ್ಷಗಳಿಗಿಂತ ಮೇಲ್ಪಟ್ಟಿದೆ ಎಂದರೆ ನಿಜ. ನಾನು ದಾನಪತ್ರವನ್ನು ನ್ಯಾಯಾಲಯದಲ್ಲಿ ಕಳೆದ ವರ್ಷ ಹಾಜರುಪಡಿಸಿದ್ದೇನೆ ಎಂದರೆ ನಿಜ. ನಾನು ಪ್ರತಿವಾದ ಪತ್ರ ಸಲ್ಲಿಸುವ ಸಮಯದಲ್ಲಿ ಸದರಿ ದಾನಪತ್ರ ನನ್ನ ಬಳಿ ಇರಲಿಲ್ಲ ಎಂದರೆ ನಿಜ.

1, 3 ಮತ್ತು 4 ನೇ ಪ್ರತಿವಾದಿಗಳ ವಿರುದ್ಧ ನಾನು ಒಂದು ಖಾಸಗಿ ದೂರು ದಾಖಲು ಮಾಡಿದ್ದೇನೆ ಎಂದರೆ ನಿಜ. 1, 2 ಮತ್ತು 4 ನೇ ಪ್ರತಿವಾದಿಗಳು 5 ನೇ ಪ್ರತಿವಾದಿಗೆ ದಾವಾ ಐಟಂ ನಂ.1 ಮತ್ತು 2 ರ ಸ್ವತ್ತುಗಳನ್ನು ದಾನ ಮಾಡಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ಸದರಿ ದಾನಪತ್ರವನ್ನು ನ್ಯಾಯಾಲಯದಲ್ಲಿ ರಾಜಿಯಾದ ನಂತರ ಮಾಡಲಾಗಿದೆ ಎಂದರೆ ನನಗೆ ಗೊತ್ತಿಲ್ಲ. ಸದರಿಯವರು ರಾಜಿಯಾದ ದಿನ ನಾನೂ ಸಹ ನ್ಯಾಯಾಲಯದಲ್ಲಿ ಹಾಜರಿದ್ದೆ ಎಂದರೆ ಸರಿಯಲ್ಲ. ರಾಜಿಯಾದ ವಿಚಾರ ನನಗೆ ಗೊತ್ತಿದ್ದರೂ ಸಹ ಗೊತ್ತಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಐಟಂ ನಂ.1 ಮತ್ತು 2 ರ ಸ್ವತ್ತುಗಳು ಪ್ರತಿವಾದಿ-1, 2 ಮತ್ತು 4 ರವರ ಸ್ವಂತ ಆಸ್ತಿಗಳಾಗಿದ್ದವು ಎಂದರೆ ಸರಿಯಲ್ಲ. ಸದರಿ ಸ್ವತ್ತುಗಳು 5 ನೇ ಪ್ರತಿವಾದಿಗೆ ದಾನ ಕೊಟ್ಟಿರುವುದರಿಂದ 5 ನೇ ಪ್ರತಿವಾದಿಯೇ ಮಾಲೀಕರು ಎಂದರೆ ಸರಿಯಲ್ಲ. ದಾವಾ ಐಟಂ ನಂ.2 ರ ಸ್ವತ್ತಿನಲ್ಲಿ 5 ನೇ ಪ್ರತಿವಾದಿಯು ಸ್ವಾಧೀನದಲ್ಲಿದ್ದಾರೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 5 ನೇ ಪ್ರತಿವಾದಿ ಪರ ವಕೀಲರ ಕೋರಿಕೆಯ ಮೇರೆಗೆ ಪಾಟೀ ಸವಾಲು ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ.ಸರಿ.ಇದೆ.

ಸಿವಿಲ್ ನ್ಯಾಯಾಧೀಶರು, ಜೇವರ್ಗಿ